158ಸ/ಸಮು 116
4FR
01/04/26

<u>ಕರ್ನಾಟಕ ವಿಧಾನ ಪರಿಷತ್ತು</u>

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಗೋವಿಂದರಾಜು, ಇವರು ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** **ಗ್ರಾಮ ಸರಕಾರಗಳೆಂದೇ ಕರೆಸಿಕೊಳ್ಳುವ ಗ್ರಾಮ ಪಂಚಾಯಿತಿಗಳು ತೆರಿಗೆ ಬಾಕಿಯಿಂದಾಗಿ ಸೊರಗಿವೆ. ಗ್ರಾಮ ಪಂಚಾಯತ್‌ಗಳಿಂದ ಒಟ್ಟು 3,378 ಕೋಟಿ ರೂ. ತೆರಿಗೆ ಬಾಕಿ ಇದ್ದು, ಸರಿಯಾದ ಸಮಯದಲ್ಲಿ ತೆರಿಗೆ ಸಂಗ್ರಹವಾಗದ ಕಾರಣ ರಾಜ್ಯದ ಬೊಕ್ಕಸ ಬರಗಾಲ ಎದುರಿಸುತ್ತಿದೆ. ಗ್ರಾ.ಪಂ. ಕಚೇರಿಗೆ ತೆರಳಿ ತೆರಿಗೆ ಕಟ್ಟುವವರ ಪ್ರಮಾಣ ಶೇ.10ಕ್ಕೂ ಕಡಿಮೆ, ಉಳಿದ ಶೇ 90 ಜನರಿಂದ ಆಸ್ತಿ ತೆರಿಗೆ, ನೀರಿನ ಶುಲ್ಕ ಸಂಗ್ರಹಿಸುವುದು ಗ್ರಾಮ ಪಂಚಾಯತ್ ಸಿಬ್ಬಂದಿ. ಆದರೆ ಮನೆ ಬಾಗಿಲಿಗೆ ಹೋದಾಗ ನೂರೊಂದು ಕಾರಣ ಹೇಳುವುದರಿಂದ ತೆರಿಗೆ ಸಂಗ್ರಹಕ್ಕೆ ಹಿನ್ನಡೆಯಾಗಿ ಎಂಬುದು ನಿಜವಾಗಿದ್ದರೇ. ಇದಕ್ಕೆ ಕಾರಣ ಕಂಡುಕೊಳ್ಳಬೇಕಾಗಿರುವುದು ಇಲಾಖೆಗೆ ಕೆಲಸ, ಕ್ರಮಬದ್ಧವಲ್ಲದ ಆಸ್ತಿಗೆ ಕಂದಾಯ ಸ್ವೀಕರಿಸದೇ ಇರುವುದು. ಕೃಷಿ ಉತ್ಪನ್ನ ಬೆಲೆ ಕುಸಿತದಿಂದ ರೈತರು ಬೆಳೆ ಮಾರದೇ ಇರುವುದು, ಕುಟುಂಬದ ಆಸ್ತಿ ಪಾಲು-ವಿಭಾಗ ಆಗದೇ ಇರುವುದು, ತೆರಿಗೆ ಪಾವತಿಸಬೇಕೆಂಬ ಬಗ್ಗೆ ಗ್ರಾಮೀಣರಲ್ಲಿ ಅರಿವಿನ ಕೊರತೆ, ಬಹುತೇಕ ಆಸ್ತಿಗಳು ಮೃತರ ಹೆಸರಿನಲ್ಲಿರುವುದು ಮುಖ್ಯ ಇವುಗಳ ಬಗ್ಗೆ ಶೀಘ್ರವಾಗಿ ಕ್ರಮ ತೆಗೆದುಕೊಳ್ಳಬೇಕಾಗಿರುವ ಬಗ್ಗೆ.**

**ಉತ್ತರ:** **1.** ಗ್ರಾಮ ಪಂಚಾಯಿತಿಗಳಿಂದ ಪ್ರಸ್ತುತ ವರ್ಷದಲ್ಲಿ ₹. 1602.56 ಕೋಟಿಗಳ ತೆರಿಗೆ ಬೇಡಿಕೆಯಿದ್ದು, ದಿನಾಂಕ: 06.03.2026 ರ ಅಂತ್ಯಕ್ಕೆ ₹. 1226.10 ಕೋಟಿಗಳಷ್ಟು ತೆರಿಗೆ ಸಂಗ್ರಹವಾಗಿರುತ್ತದೆ. ಹಿಂದಿನ ವರ್ಷಗಳ ತೆರಿಗೆ ಬಾಕಿ ₹.3245.00 ಕೋಟಿಗಳನ್ನು ಸಂಗ್ರಹಿಸಲು ತೆರಿಗೆ ಅಭಿಯಾನಗಳ ಹಾಗೂ IEC ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

**2.** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರ ಅನ್ವಯ ಇ-ಸ್ವತ್ತು 2.0 ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಸಾರ್ವಜನಿಕರು ತಮ್ಮ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆಗಳನ್ನು ಪಡೆಯಲು ಆಸ್ತಿ ತೆರಿಗೆ ಪಾವತಿಯನ್ನು ಕಡ್ಡಾಯಗೊಳಿಸಲಾಗಿರುತ್ತದೆ.

3. ತೆರಿಗೆ ಬಾಕಿಯನ್ನು ಸಂಗ್ರಹಿಸುವ ಬಗ್ಗೆ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರಗತಿ ಪರಿಶೀಲನಾ ಸಭೆಗಳಲ್ಲಿ ನಿರ್ದೇಶನ ನೀಡಲಾಗಿದ್ದು, ಅದರಂತೆ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ತೆರಿಗೆ ವಸೂಲಾತಿ ಆಂದೋಲನಗಳನ್ನು ವಿನೂತನವಾಗಿ ಹಮ್ಮಿಕೊಂಡು ಮಾಹಿತಿ, ಶಿಕ್ಷಣ, ಸಂವಹನದ (IEC) ಮೂಲಕ ತೆರಿಗೆ ವಸೂಲಾತಿಗೆ ಕ್ರಮ ವಹಿಸಲಾಗುತ್ತಿರುತ್ತದೆ.

4. ಸಾರ್ವಜನಿಕರು ತಾವಿರುವಲ್ಲಿಯೇ ತಮ್ಮ ಆಸ್ತಿಗೆ ಸಂಬಂಧಿಸಿದಂತೆ ತೆರಿಗೆ ಪಾವತಿಗಾಗಿ Phone Pay, Google Pay, ಇಲಾಖೆಯ 'ಬಾಪೂಜಿ ಸೇವಾ ಕೇಂದ್ರ' POS Machine ಗಳ ಮೂಲಕ ತೆರಿಗೆ ಪಾವತಿ ಬಗ್ಗೆ ಅವಕಾಶ ಕಲ್ಪಿಸಲಾಗಿರುತ್ತದೆ ಹಾಗೂ ಆಸ್ತಿಯ ಬಗ್ಗೆ ಪಾವತಿಸಬೇಕಾದ ತೆರಿಗೆಯ ವಿವರಗಳನ್ನು ವೀಕ್ಷಿಸಲು ಪಂಚಮಿತ್ರ ತಂತ್ರಾಂಶದಲ್ಲಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

5. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ಅನ್ನು ದಿನಾಂಕ: 07.04.2025 ರಲ್ಲಿ ಅಧಿಸೂಚಿಸಲಾಗಿರುತ್ತದೆ. ಸದರಿ ತಿದ್ದುಪಡಿ ಅಧಿನಿಯಮದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ 14) ರ 199ಎ ಪ್ರಕರಣದ ತರುವಾಯ 199ಬಿ ಮತ್ತು 199ಸಿ ಹೊಸ ಪ್ರಕರಣಗಳನ್ನು ಸೇರ್ಪಡೆ ಮಾಡಲಾಗಿರುತ್ತದೆ. ಇದರಿಂದಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತೆರಿಗೆಗೆ ಒಳಪಡದ ಎಲ್ಲಾ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಬಹುದಾಗಿದ್ದು, ಗ್ರಾಮ ಪಂಚಾಯತಿಗಳ ಸ್ವಂತ ಸಂಪನ್ಮೂಲ ಗಣನೀಯವಾಗಿ ಹೆಚ್ಚಳವಾಗಲಿದೆ.

6. ಪ್ರಕರಣ 199ಸಿ ರಲ್ಲಿ ಗ್ರಾಮ ಪಂಚಾಯಿತಿಯು ಮಾದರಿ ಕಟ್ಟಡ ಉಪವಿಧಿಗಳ ಉಪಬಂಧಗಳನ್ನು ಉಲ್ಲಂಘಿಸಿ ನಿರ್ಮಿಸಲಾದ ಕಟ್ಟಡ ಅಥವಾ ಪರಿವರ್ತನೆಯಾಗದಿರುವ ಭೂಮಿ ಅಥವಾ ಪರಿವರ್ತನೆಯಾದ ಭೂಮಿ ಆದರೆ ಕಂದಾಯ ಭೂಮಿಯ ಮೇಲಿನ ಅನುಮೋದಿತವಲ್ಲದ ಲೇಔಟ್ ಅಥವಾ ಅಧಿಭೋಗ ಅಥವಾ ಪೂರ್ಣಗೊಳಿಸಿದ ಪ್ರಮಾಣ ಪತ್ರವನ್ನು ಪಡೆಯದೆ ಸ್ವಾಧೀನ ಪಡಿಸಿಕೊಂಡ ಕಟ್ಟಡವನ್ನು ಒಳಗೊಂಡು ಪ್ರತಿಯೊಂದು ಕಟ್ಟಡ, ಖಾಲಿ ಭೂಮಿ ಅಥವಾ ಅವರಡರಿಂದಲೂ, ಈ ಉಪಬಂಧವನ್ನು ಸೇರಿಸಲಾದ ದಿನಾಂಕಕ್ಕೆ ಮೊದಲು ಸೃಜಿಸಲಾದ ಸ್ವತ್ತುಗಳಿಗೆ ಮಾತ್ರ, ಸರ್ಕಾರಿ ಭೂಮಿ ಅರಣ್ಯ ಭೂಮಿ, ಸರ್ಕಾರದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಸ್ಥಳೀಯ ನಿಕಾಯ, ಯಾವುದೇ ಶಾಸನಬದ್ಧ ನಿಕಾಯ ಅಥವಾ ಸಂಸ್ಥೆಗೆ ಸೇರಿದ ಭೂಮಿಯನ್ನು ಹೊರತುಪಡಿಸಿ ಸ್ವತ್ತು ತೆರಿಗೆಯನ್ನು ವಿಧಿಸಬಹುದು ಮತ್ತು ಸಂಗ್ರಹಿಸಬಹುದು.

7. ಅದರನ್ವಯ ಅಂಥ ಕಟ್ಟಡ ಅಥವಾ ನಿವೇಶನಕ್ಕಾಗಿ ವಿಧಿಸಿದ ಸ್ವತ್ತು ತೆರಿಗೆಯು ಮೊದಲ ವರ್ಷಕ್ಕಾಗಿ ಪಾವತಿಸಬೇಕಾದ ತೆರಿಗೆಯು ಎರಡು ಪಟ್ಟಾಗಿರತಕ್ಕದ್ದು ಮತ್ತು ತರುವಾಯ ವರ್ಷಗಳಿಗಾಗಿ ಸ್ವತ್ತು ತೆರಿಗೆಯನ್ನು ಮಾತ್ರ ವಿಧಿಸತಕ್ಕದ್ದು, ಅದರನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ರನ್ವಯ ಸದರಿ ಆಸ್ತಿಗಳಿಗೆ ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

8. ಮುಂದುವರೆದು, ಇ-ಸ್ವತ್ತು 2.0 ತಂತ್ರಾಂಶದಲ್ಲಿ ಆಸ್ತಿಗಳ ವಿಭಜನೆಗೆ ಅವಕಾಶ ಕಲ್ಪಿಸಿದ್ದು, ಸಕ್ಷಮ ಯೋಜನಾ ಪ್ರಾಧಿಕಾರದಿಂದ ಅನುಮೋದಿತ ನಕ್ಷೆಯೊಂದಿಗೆ ಗ್ರಾಮ ಪಂಚಾಯಿತಿಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಇ-ಸ್ವತ್ತು ನಮೂನೆಯನ್ನು ಆಸ್ತಿ ವಿಭಜಿಸಿ ನೊಂದಣಿಗೆ ಅನುವಾಗುವಂತೆ ಮಾರ್ಪಾಡು ಮಾಡಿ ನಮೂನೆ ವಿತರಿಸಲಾಗುತ್ತಿದೆ ಹಾಗೂ ಮೃತರ ಹೆಸರಿನಲ್ಲಿ ಖಾತೆ ಇದ್ದರೆ ವಂಶವೃಕ್ಷ ಮತ್ತು ಮರಣ ಪ್ರಮಾಣ ಪತ್ರವನ್ನು ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿದ್ದಲ್ಲಿ ಖಾತೆ ಬದಲಾವಣೆ ಮಾಡಲಾಗುತ್ತಿದೆ.

**ಸಂಖ್ಯೆ:**RDPR 269 GPA 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.